ಅಧ್ಯಕ್ಷರು : ವಿಧೇಯವನ್ನು ಮಂಡಿಸಲಾಗಿದೆ.

3. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ವಿಧೇಯಕ 1995

ಶ್ರೀ ರಮೇಶ್ ಸಿ. ಜಿಗಜಿಣಗಿ (ಮಾನ್ಯ ಸಮಾಜ ಕಲ್ಯಾಣ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ,

"1995ರ ಸಾಲಿನ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"1995ರ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ರಮೇಶ್ ಸಿ. ಜಿಗಜಿಣಗಿ (ಸಮಾಜ ಕಲ್ಯಾಣ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ

"1995ರ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಸಭಾಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಕರ್ನಾಟಕ ನಗರ ಪ್ರದೇಶದಲ್ಲಿರುವ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವ (ತಿದ್ದುಪಡಿ) ವಿಧೇಯಕವನ್ನು 1995

ಪರ್ಯಾಲೋಚನಾ ಪ್ರಸ್ತಾವ

ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ ಕಾಡಾ ಮತ್ತು ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಲಿ ಸಚಿವರು) : ಮಾನ್ಯ ಅಧ್ಯಕ್ಷರೆ, "1995ರ ಕರ್ನಾಟಕ ನಗರ ಪ್ರದೇಶಗಳಲ್ಲಿರುವ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು

+ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ ಕಾಡಾ ಮತ್ತು ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಲಿ ಸಚಿವರು) : ಮಾನ್ಯ ಅಧ್ಯಕ್ಷರೆ, ಅನಧಿಕೃತ ಕಟ್ಟಡಗಳ ನಿರ್ಮಾಣ ಬಹಳಷ್ಟು ಪಟ್ಟಣಗಳಲ್ಲಿ ಅನೇಕ ವರ್ಷಗಳಿಂದ ನಡೆಯುತ್ತಾ ಬಂದಿದೆ. ಅಂಥವುಗಳನ್ನು ರೆಗ್ಯುಲರೈಸ್ ಮಾಡಬೇಕೆಂದು ಒಂದು ವಿಧೇಯಕ ಈ ಮೊದಲೇ ಪಾಸ್‌ಆಗಿದೆ. ಆದರೆ ಅದಕ್ಕೆ ಅನೇಕ ತಿದ್ದುಪಡಿಗಳನ್ನು ಮಾಡುವ ಸಲುವಾಗಿ ಈ ವಿಧೇಯಕವನ್ನು ತಂದಿದ್ದೇವೆ. ಈ ಹಿಂದೆ ಅಂದರೆ 1991ರಲ್ಲಿ ಮಾಡಿದರು, ಅದರಲ್ಲಿ ಕೆಲವು ಬದಲಾವಣೆ ಆಗಬೇಕಾಗಿದೆ. ಈಗ ಮೊದಲಿನ ತಾರೀಖಿನ ಪ್ರಕಾರ 1995ರ ಜನವರಿ 1ನೇ ತಾರೀಖಿನವರೆಗೆ ಯಾರ್ಯಾರು ಅನಧಿಕೃತವಾಗಿ ಕಟ್ಟಡಗಳನ್ನು ಕಟ್ಟಿದರು ಅದನ್ನೆಲ್ಲಾ ರೆಗ್ಯುಲರೈಸ್ ಮಾಡುವ ಸಲುವಾಗಿ ಆ ತಾರೀಖನ್ನು ಅಕ್ಟೋಬರ್ 94ರಿಂದ ಅಕ್ಟೋಬರ್ 95ರವರೆಗೆ ಕಾಲವನ್ನು ವಿಸ್ತರಣೆ ಮಾಡುವ ಸಲುವಾಗಿ ಈ ವಿಧೇಯಕವನ್ನು ಮಾಡಿದೆ. ಇದನ್ನು ಮಾಡುವ ಸಲುವಾಗಿ ರೆಗ್ಯುಲರೈಸೇಷನ್ ಮಾಡುವ ಸಂದರ್ಭದಲ್ಲಿ ಅನೇಕ ಬೋರ್ಡಗಳು, ಡೆವಲಪ್ಮೆಂಟ್